Sri S.S.Patil : Under the cooperative Act, for restoration/ reinstatement there is no provison.

ಶ್ರೀ ಡಿ.ವಿ.ಸದಾನಂದಗೌಡ : ಚುನಾವಣೆಗಳನ್ನು ಎಷ್ಟು ಸಮಯದಲ್ಲಿ ಮಾಡುತ್ತೀರಿ ಎಂಬುದನ್ನು ಹೇಳಿ.

ಶ್ರೀ ಬಿ.ಎಸ್.ಯಡಿಯೂರಪ್ಪ : ನಿರ್ದಿಷ್ಟವಾಗಿ ಒಂದು ತಿಂಗಳಲ್ಲಿ ಚುನಾವಣೆಗಳನ್ನು ಮಾಡಿ ಮುಗಿಸಿ.

ಶ್ರೀ ಎಸ್.ಎಸ್.ಪಾಟೀಲ್ : ನಾನು ಸ್ಪಷ್ಟವಾಗಿ ಹೇಳುತ್ತೇನೆ. ಆದಷ್ಟು ಜಾಗ್ರತೆ ಚುನಾವಣೆ ಮಾಡಿ ಅಧಿಕಾರವನ್ನು ವಹಿಸಿಕೊಡುತ್ತೇವೆ.

ಕರ್ನಾಟಕ ವಿಧಾನಮಂಡಲದವರ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕ, 1995

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎಂ.ಸಿ.ನಾಣಯ್ಯ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) : ಮಾನ್ಯ ಅಧ್ಯಕ್ಷರೆ, 1995ರ ಕರ್ನಾಟಕ ವಿಧಾನಮಂಡಲದವರ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಛೇರ್‌ಮನ್ : ಪ್ರಸ್ತಾವ ಏನೆಂದರೆ 1995ರ ಕರ್ನಾಟಕ ವಿಧಾನಮಂಡಲದವರ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳು (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಂಡನೆಗೆ ಅನುಮತಿ ನೀಡಲಾಯಿತು

ಶ್ರೀ ಎಂ.ಸಿ.ನಾಣಯ್ಯ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) ಮಾನ್ಯ ಅಧ್ಯಕ್ಷರೆ, 1995ರ ಕರ್ನಾಟಕ ವಿಧಾನಮಂಡಲದವರ ವೇತನಗಳು, ನಿವೃತ್ತಿವೇತನಗಳು ಮತ್ತು ಭತ್ಯೆಗಳು (ತಿದ್ದುಪಡಿ)(ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಛೇರ್‌ಮೆನ್ : ವಿಧೇಯಕವನ್ನು ಮಂಡಿಸಲಾಗಿದೆ.

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಎಂ.ಸಿ.ನಾಣಯ್ಯ(ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು): ಮಾನ್ಯ ಅಧ್ಯಕ್ಷರೇ, 1995ರ ಕರ್ನಾಟಕ ವಿಧಾನಮಂಡಲದವರ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳು (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಶ್ರೀ ಎಂ.ಸಿ.ನಾಣಯ್ಯ : ಮಾನ್ಯ ಸಭಾಧ್ಯಕ್ಷರೇ ಇದೊಂದು ಸರಳವಾಗಿರತಕ್ಕಂಥ ತಿದ್ದುಪಡಿ, ಇದು ತಮಗೆಲ್ಲರಿಗೂ ಗೊತ್ತಿದೆ, ಈಗಿರತಕ್ಕಂಥ ಸೌಲಭ್ಯದ ಪ್ರಕಾರ ರಾಜ್ಯದ ಒಳಗಡೆ ನಮ್ಮ ಕೆ.ಎಸ್.ಆರ್.ಟಿ.ಸಿ ಬಸ್ಸುಗಳಲ್ಲಿ ಶಾಸಕರುಗಳು ಹೋಗುವುದಕ್ಕೆ ಸೌಲಭ್ಯ ಇದೆ, ಇದನ್ನು ರಾಜ್ಯದ ಹೊರಗಡೆಯು ಕೂಡ ಮಾಡಬೇಕು ಎಂದು ಹೇಳುತ್ತಾ ಇರತಕ್ಕಂಥದ್ದು ಒಂದು. ಎರಡನೆಯದು, ಈ ಭತ್ಯೆ